# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರವರ ಕಛೇರಿ, ಕೆಂಪೇಗೌಡನಗರ ಉಪವಿಭಾಗ ಚಿಕ್ಕಪೇಟೆ ವಿಭಾಗ, ಬೆಂಗಳೂರು.

ಸ.ಕಾ.ನಿ.ಅ(ಕೆ.ಗೌ.ನ)/ಪಿ.ಆರ್/ 177 /2022-23 ದಿನಾಂಕ : 11-8-2022

ದಿನಾಂಕ: 06-08-2022 ರಂದು ಈ ಉಪವಿಭಾಗದ ವಾರ್ಡ್ ಸಂಖ್ಯೆ 143ರ ವಾರ್ಡ್ ಕಛೇರಿಯಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡಾವಳಿಗಳು ಈ ಕೆಳಕಂಡಂತಿರುತ್ತದೆ.

<u>ಉಪಸ್ಥಿತರು:</u>

| ಕ್ರ ಸಂ. | ಹೆಸರು | ಹುದ್ದೆ | ಮೊಬೈಲ್ ಸಂಖ್ಯೆ |
|---|---|---|---|
| 1 | ಶ್ರೀ. ಉಮಾಶಂಕರ್ | ನೋಡಲ್ ಅಧಿಕಾರಿಗಳು ಹಾಗೂ ಉಪನಿರ್ದೇಶಕರು ನಗರ ಯೋಜನೆ (ದಕ್ಷಿಣ) | 9480684418 |
| 2 | ಶ್ರೀ. ಸಿ.ಲಿಂಗರಾಜೇಗೌಡ | ಕಾರ್ಯದರ್ಶಿ ಹಾಗೂ ಕಿರಿಯ ಅಭಿಯಂತರರು ವಾರ್ಡ್ ಸಂಖ್ಯೆ:143 | 9480688143 |
| 3 | ಬಸವನಗುಡಿ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್ | ಸದಸ್ಯರು | 8217636732 |
| 4 | ಶ್ರೀ.ರಾಮಯ್ಯಂಗಾರ್ ರಸ್ತೆ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್ | ಸದಸ್ಯರು | 9901066586 |
| 5 | ವಿ.ವಿ.ಪುರಂ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್ | ಸದಸ್ಯರು | |
| 6 | ಎಂ.ಎಂ.ವಿ ರಸ್ತೆ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್ | ಸದಸ್ಯರು | 9448387878 |
| 7 | ಚಿಕ್ಕಣ್ಣ ಗಾರ್ಡನ್ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್ | ಸದಸ್ಯರು | 9448508638 |
| 8 | ಪಾರ್ವತಿಪುರ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್ | ಸದಸ್ಯರು | |
| 9 | ಶ್ರೀ.ಟಿ.ಆಂಜನೇಯ | ಹಿರಿಯ ಆರೋಗ್ಯ ಪರಿವೀಕ್ಷಕರು | 9880052188 |
| 10 | ಶ್ರೀ. ಡಿ.ಸುರೇಶ್ | ಎ.ಎಸ್.ಐ ವಿ.ವಿ.ಪುರಂ | 9738272392 |

ದಿನಾಂಕ 06-08-2022 ರಂದು ನಡೆದ ವಾರ್ಡ್ -143 ರ ಸಮಿತಿ ಸಭೆಯ ನಡಾವಳಿಗಳು:

ಮಾನ್ಯ ನೋಡಲ್ ಅಧಿಕಾರಿಗಳು ಹಾಗೂ ಅಧ್ಯಕ್ಷರು ರವರ ಅನುಮತಿಯೊಂದಿಗೆ ಕಾರ್ಯದರ್ಶಿಗಳು ಹಾಗೂ ಸಹಾಯಕ ಅಭಿಯಂತರರು ಸಭೆಯಲ್ಲಿ ಹಾಜರಿದ್ದ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್‌ಗಳ ಅಧ್ಯಕ್ಷರುಗಳು ಹಾಗೂ ವಿವಿಧ ಇಲಾಖೆಗಳ ಅಧಿಕಾರಿಗಳನ್ನು ಸ್ವಾಗತಿಸುವ ಮೂಲಕ ಸಮಿತಿ ಸಭೆಯನ್ನು ಪ್ರಾರಂಭಿಸಲಾಯಿತು.

ಮು.ಪಿ.ನೋ

ಮೊದಲು ರಾಮಯ್ಯಂಗಾರ್ ರಸ್ತೆ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೋಷನ್‌ನ ಶ್ರೀ.ಓ.ವಿ.ಜಯಕುಮಾರ್ ರವರು ಮಾತನಾಡಿ ಕೆಲವು ವಿಷಯಗಳನ್ನು ಸಭೆಯಲ್ಲಿ ಪ್ರಸ್ತಾಪಿಸಿ ಸೂಕ್ತ ಕ್ರಮಕೈಗೊಳ್ಳುವಂತೆ ಕೋರಿದರು ಅವುಗಳೆಂದರೆ:-

1. ವಾಸವಿ ದೇವಸ್ಥಾನದ ರಸ್ತೆ ಮತ್ತು ಕವಿಲಕ್ಷ್ಮೀಶ ರಸ್ತೆಗಳಿಗೆ ಹೊಂದಿಕೊಂಡಂತಿರುವ ಪಾರಿವಾಳಗಳಿಗೆ ಆಹಾರ ಧಾನ್ಯಗಳನ್ನು ಹಾಕುತ್ತದ್ದ ಐಲ್ಯಾಂಡ್‌ಅನ್ನು ತೆರವುಗೊಳಿಸಲಾಗಿದ್ದು, ಸದರಿ ಸ್ಥಳದಲ್ಲಿ ಆಟೋ ನಿಲ್ದಾಣ (Auto Stand) ವನ್ನು ನಿರ್ಮಿಸುವುದು.
2. ವಾರ್ಡ್‌ನಲ್ಲಿನ ರಸ್ತೆ ಅಗೆತಗಳಿಗೆ ರಸ್ತೆಗೆ ಸಮನಾಗಿ ಡಾಂಬರು ಹಾಕುವುದು.
3. ಆರ್.ವಿ.ರಸ್ತೆ ಕಾಮತ್ ಟೂರಿಸ್ಟ್ ಮುಂಭಾದ ನೀರು ನಿಲ್ಲುತ್ತಿದ್ದು ಹರಿಯುವಂತೆ ಮಾಡುವುದು.
4. ಮಾವಳ್ಳಿಯ ಸುಶೀಲಾ ರಸ್ತೆಗೆ ಹೊಸದಾಗಿ ಕಾಂಕ್ರೀಟ್ ರಸ್ತೆ ಮಾಡುವುದು.

ಈ ಮೇಲಿನ ಎಲ್ಲಾ ವಿಷಯಗಳ ಬಗ್ಗೆ ಚರ್ಚಿಸಲಾಗಿ ಮಾನ್ಯ ನೋಡಲ್ ಅಧಿಕಾರಿಗಳು ಕ್ರಮ ಸಂಖ್ಯೆ 1, 2, 4 ಕ್ಕೆ ಸಂಬಂಧಿಸಿದಂತೆ ಸೂಕ್ತ ಕ್ರಮ ವಹಿಸುವಂತೆ ವಾರ್ಡ್ ಅಭಿಯಂತರರಿಗೆ ಸೂಚಿಸಿದರು. ಕ್ರಮ ಸಂಖ್ಯೆ (3) ಕ್ಕೆ ಸಂಬಂಧಿಸಿದಂತೆ ರಸ್ತೆ ಮತ್ತು ಮೂಲಭೂತ ಸೌಕರ್ಯ ವಿಭಾಗ ಅಧಿಕಾರಿಗಳನ್ನು ಕ್ರಮ ವಹಿಸುವಂತೆ ಕೋರುವುದಾಗಿ ಸಭೆಗೆ ತಿಳಿಸಿದರು.

ನಂತರ ಎಂ.ಎಂ.ವಿ.ರಸ್ತೆ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್‌ನ ಶ್ರೀ.ವೆಂಕಟೇಶ್ ರವರು ಮಾತನಾಡುತ್ತಾ ಸಜ್ಜನ್‌ರಾವ್ ವೃತ್ತದ ಬಳಿ ಇರುವ Pigeon park ನ್ನು ಆಟೋ ನಿಲ್ದಾಣ (Auto Stand) ವನ್ನಾಗಿ ಮಾಡಲು ಮಾನ್ಯ ಶಾಸಕರು ಒಪ್ಪಿಗೆ ಸೂಚಿಸಿದ್ದು ಈ ಸಂಬಂಧ ಈಗಾಗಲೇ ಸಂಚಾರ ಪೋಲೀಸ್ ಠಾಣೆಯ (ವಿ.ವಿ.ಪುರಂ) ನಿರೀಕ್ಷಕರಾದ ಶ್ರೀ. ಶಿವಶಂಕರ್ ರವರ ಬಳಿ ಚರ್ಚಿಸಿದ್ದು ಈ ಬಗ್ಗೆ ಜರೂರಾಗಿ ಕ್ರಮ ಕೈಗೊಳ್ಳಬೇಕೆಂದು ಮತ್ತು ನ್ಯಾಷನಲ್ ಹೈ ಸ್ಕೂಲ್ ರಸ್ತೆ ಹಾಗೂ ಎಂ.ಎಂ.ವಿ.ರಸ್ತೆಗಳು ಸೇರುವ ಸ್ಥಳದಲ್ಲಿ ರಸ್ತೆ ಉಬ್ಬು (Road Hump) ನ್ನು ಹಾಕಬೇಕೆಂದು ಕೋರಿದರು. ಈ ವಿಷಯವಾಗಿ ಕ್ರಮ ವಹಿಸುವಂತೆ ವಾರ್ಡ್‌ನ ಅಭಿಯಂತರರಿಗೆ ಮಾನ್ಯ ನೋಡಲ್ ಅಧಿಕಾರಿಗಳು ಸೂಚಿಸಿದರು.

ನಂತರ ಬಸವನಗುಡಿ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್‌ನ ಶ್ರೀ.ರಾಜು ರವರು ಮಾತನಾಡಿ ಈ ಕೆಳಕಂಡ ವಿಷಯಗಳ ಬಗ್ಗೆ ಸಭೆಯಲ್ಲಿ ಚರ್ಚಿಸಿ ಸೂಕ್ತ ಕ್ರಮಕೈಗೊಳ್ಳುವಂತೆ ಕೋರಿದರು, ಅವುಗಳೆಂದರೆ:-

1. ಆರ್.ವಿ ರಸ್ತೆಯಲ್ಲಿ ಬಸ್ ಶೆಲ್ಟರ್ ಅನ್ನು ನಿರ್ಮಿಸುವುದು.
2. ಶ್ರೀ.ರಾಮ ಮಂದಿರ ರಸ್ತೆಯಲ್ಲಿ ಕನ್ಸರ್‌ವೆನ್ಸಿಯಲ್ಲಿರುವ ಹಸುವಿನ ಶೆಡ್ಡನ್ನು ತೆರವುಗೊಳಿಸುವುದು.
3. ಎಂ.ಎನ್. ಕೃಷ್ಣರಾವ್ ರಸ್ತೆಯ ಪಾದಚಾರಿ ಮಾರ್ಗದ ಕೆಲವು ಕಡೆಗಳಲ್ಲಿ ಬೊಲ್ಲಾರ್ಡ್‌ಗಳನ್ನು ಹಾಕುವುದು.
4. ಸರ್ವೆಯರ್ ರಸ್ತೆಯ ಕನ್ಸರ್‌ವೆನ್ಸಿಯಲ್ಲಿರುವ ನಾನ್ ವೆಜ್ ಹೋಟೆಲ್‌ನ್ನು ತೆರವುಗೊಳಿಸುವುದು.
5. ಸರ್ವೆಯರ್ ರಸ್ತೆಯಲ್ಲಿರುವ ಹಾರ್ಡ್‌ವೇರ್ ಶಾಪ್‌ನ ಕಟ್ಟಡದ ಮಾಲೀಕರು ಒತ್ತುವರಿ ಮಾಡಿರುವ ಜಾಗವನ್ನು ತೆರವುಗೊಳಿಸುವುದು.
6. ಕೆ.ಆರ್. ರಸ್ತೆಯಲ್ಲಿನ ಪಾದಚಾರಿ ಮಾರ್ಗದಲ್ಲಿರುವ ನರ್ಸರಿ (Nursery) ಯನ್ನು ತೆರವುಗೊಳಿಸುವುದು.

ಈ ಎಲ್ಲಾ ವಿಷಯಗಳ ಬಗ್ಗೆ ಮಾನ್ಯ ನೋಡಲ್ ಅಧಿಕಾರಿಗಳು ಸಭೆಯಲ್ಲಿ ಸಮಗ್ರವಾಗಿ ಚರ್ಚಿಸಿ ಸಂಬಂಧಿಸಿದ ಇಲಾಖೆಗಳ ಅಧಿಕಾರಿಗಳೊಂದಿಗೆ ಸಮನ್ವಯತೆ ಸಾಧಿಸಿ ಸೂಕ್ತ ಕ್ರಮ ಕೈಗೊಳ್ಳುವಂತೆ ವಾರ್ಡ್ ಅಭಿಯಂತರರಿಗೆ ಸೂಚಿಸಿದರು.

ಮು.ತಿ.ನೋ

ನಂತರ ಮಾನ್ಯ ಎಂ.ಎಂ.ವಿ.ರಸ್ತೆಯ ಶ್ರೀ.ವೆಂಕಟೇಶ್ ರವರು ಮಾತನಾಡಿ ಕವಿಲಕ್ಷ್ಮೀಶ ರಸ್ತೆ ನ್ಯಾಷನಲ್ ಕಾಲೇಜ್ ಸಿಗ್ನಲ್ ನಿಂದ ಸಜ್ಜನ್‌ರಾವ್ ವೃತ್ತದ ವರೆಗಿನ ಪಾದಚಾರಿ ಮಾರ್ಗ ಹಾಳಾಗಿದ್ದು ಸರಿಪಡಿಸಿಕೊಡುವಂತೆ ಕೋರಿದರು. ಆಗ ಮಾನ್ಯ ನೋಡಲ್ ಅಧಿಕಾರಿಗಳು ಸಂಬಂಧಪಟ್ಟ ಅಧಿಕಾರಿಗಳನ್ನು ಸಂಪರ್ಕಿಸಿ ಕ್ರಮ ಕೈಗೊಳ್ಳುವಂತೆ ಕೋರುವುದಾಗಿ ತಿಳಿಸಿದರು.

ನಂತರ ಕಾರ್ಯದರ್ಶಿಗಳು ಹಾಗೂ ಸಹಾಯಕ ಅಭಿಯಂತರರವರ ವಂದನಾರ್ಪಣೆಯೊಂದಿಗೆ ವಾರ್ಡ್ ಸಮಿತಿ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

ಕಾರ್ಯದರ್ಶಿಗಳು ಹಾಗೂ
ಸಹಾಯಕ ಅಭಿಯಂತರರು
ವಾರ್ಡ್ -143 ವಿ. ವಿ.ಪುರಂ

ನೋಡಲ್ ಅಧಿಕಾರಿಗಳು
ವಾರ್ಡ್ ಸಂಖ್ಯೆ 143 ಹಾಗೂ
ಉಪನಿರ್ದೇಶಕರು ನಗರ ಯೋಜನೆ (ದಕ್ಷಿಣ)